# ದಾವಣಗೆರೆ ವಿಶ್ವವಿದ್ಯಾನಿಲಯ

ಕುಲಸಚಿವ(ಪರೀಕ್ಷಾಂಗ)ರವರ ಕಛೇರಿ, ಶಿವಗಂಗೋತ್ರಿ, ದಾವಣಗೆರೆ-577 002

ದೂರವಾಣಿ ಸಂಖ್ಯೆ: 08192-208420/208104

ಸಂಖ್ಯೆ:ದಾವಿ:ಪವಿ:2016-17 /03 ದಿನಾಂಕ: 31-03-2017

## :: ಸುತ್ತೋಲೆ ::

ವಿಷಯ: 2016-17ನೇ ಸಾಲಿನ ಸಿಬಿಸಿಎಸ್ ಪಠ್ಯಕ್ರಮದ ಪರೀಕ್ಷಾ ನಿಯಮಾವಳಿ ಕುರಿತು.

******

ದಾವಣಗೆರೆ ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ 2016-17ನೇ ಸಾಲಿನ ಸ್ನಾತಕ ಸಿಬಿಸಿಎಸ್ ಪಠ್ಯಕ್ರಮದ ಪರೀಕ್ಷಾ ನಿಯಮಾವಳಿಯನುಸಾರ ನವೆಂಬರ್/ಡಿಸೆಂಬರ್-2016ರಲ್ಲಿ ಸಿ.ಬಿ.ಸಿ.ಎಸ್. ಸ್ಕೀಂ ನಲ್ಲಿ ಪ್ರಥಮ ಸೆಮಿಸ್ಟರ್ ಪರೀಕ್ಷೆ ಬರೆದು ಅನುತ್ತೀರ್ಣಗೊಂಡ ವಿದ್ಯಾರ್ಥಿಗಳು ಮುಂದಿನ ನವೆಂಬರ್/ಡಿಸೆಂಬರ್2017ರ ಬೆಸ ಸೆಮಿಸ್ಟರ್ ನಲ್ಲಿ ಪರೀಕ್ಷೆ ತೆಗೆದುಕೊಳ್ಳಬೇಕಾಗಿರುವುದರಿಂದ ಮೇ/ಜೂನ್-2017ರಲ್ಲಿ ಪರೀಕ್ಷೆ ತೆಗೆದುಕೊಳ್ಳಲು ಅವಕಾಶವಿರುವುದಿಲ್ಲ. ಇನ್ನು ಮುಂದೆ ಸಿ.ಬಿ.ಸಿ.ಎಸ್. ಸ್ಕೀಂನಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳು ಬೆಸ ಸೆಮಿಸ್ಟರ್ ನಲ್ಲಿ ಅನುತ್ತೀರ್ಣಗೊಂಡ ವಿಷಯಗಳನ್ನು ಬೆಸ ಸೆಮಿಸ್ಟರ್ ನಲ್ಲಿ ಮತ್ತು ಸಮ ಸೆಮಿಸ್ಟರ್ ನಲ್ಲಿ ಅನುತ್ತೀರ್ಣಗೊಂಡ ವಿಷಯಗಳನ್ನು ಸಮ ಸೆಮಿಸ್ಟರ್ ನಲ್ಲಿ ಪರೀಕ್ಷೆ ತೆಗೆದುಕೊಳ್ಳಲು ತಿಳಿಸಲಾಗಿದೆ.

ಹಾಗೆಯೇ ಸಿ.ಬಿ.ಸಿ.ಎಸ್. ಸ್ಕೀಂ ನಡಿ ಪ್ರವೇಶ ಪಡೆದ ವಿದ್ಯಾರ್ಥಿಗಳು ಮುಂದಿನ 5ನೇ ಸೆಮಿಸ್ಟರ್ ಪರೀಕ್ಷೆ ತೆಗೆದುಕೊಳ್ಳಲು 1ನೇ ಸೆಮಿಸ್ಟರ್ ನ ಎಲ್ಲಾ ವಿಷಯಗಳಲ್ಲಿ ಹಾಗೂ 6ನೇ ಸೆಮಿಸ್ಟರ್ ಪರೀಕ್ಷೆ ತೆಗೆದುಕೊಳ್ಳಲು 1 ಮತ್ತು 2ನೇ ಸೆಮಿಸ್ಟರ್ ನ ಎಲ್ಲಾ ವಿಷಯಗಳಲ್ಲಿ ಕಡ್ಡಾಯವಾಗಿ ಉತ್ತೀರ್ಣರಾಗಿರಬೇಕು. ಈ ಮೇಲ್ಕಂಡ ಮಾಹಿತಿಯನ್ನು ಆಯಾ ಕಾಲೇಜಿನ ಪ್ರಾಂಶುಪಾಲರುಗಳು ವಿದ್ಯಾರ್ಥಿಗಳ ಗಮನಕ್ಕೆ ತರಲು ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.

ಕುಲಸಚಿವರು (ಪರೀಕ್ಷಾಂಗ) 31/03
ದಾವಣಗೆರೆ ವಿಶ್ವವಿದ್ಯಾನಿಲಯ
ಶಿವಗಂಗೋತ್ರಿ, ದಾವಣಗೆರೆ - 577 002

ಗೆ,
ದಾವಣಗೆರೆ ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಪ್ರತಿ:
1) ಹಣಕಾಸು ಅಧಿಕಾರಿಗಳು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
2) ಎಲ್ಲಾ ನಿಕಾಯಗಳ ಡೀನರುಗಳು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
3) ಮಾನ್ಯ ಕುಲಪತಿಗಳು / ಕುಲಸಚಿವರ ಆಪ್ತ ಕಾರ್ಯಾಲಯ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
4) ಕಛೇರಿ ಪ್ರತಿ.